ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಮಾಜ ಕಲ್ಯಾಣ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 16/6/2020

# ಎಸ್‌ಟಿ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಗಳ ತರಬೇತಿ

16/6/2020

ಸಂ.ಕ.ಸಮಾಚಾರ ಬೆಂಗಳೂರು

ಪ.ಜಾತಿ ಮತ್ತು ಪಂಗಡ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರ್ವಸಿದ್ಧತಾ ತರಬೇತಿಯನ್ನು ಪ್ರತಿಷ್ಠಿತ ತರಬೇತಿ ಸಂಸ್ಥೆಗಳಿಂದ ಆಯೋಜಿಸಿ, ಐಎಎಸ್/ಕೆಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಯಗಳಲ್ಲಿ ಉತ್ತೀರ್ಣರಾಗಿರುವವರ ವಿವರವನ್ನು ಸಂಗ್ರಹಿಸಬೇಕೆಂದು ಉಪಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ ಸೂಚಿಸಿದ್ದಾರೆ.

ವಿಕಾಸಸೌಧದಲ್ಲಿಂದು ನಡೆದ ರಾಜ್ಯಮಟ್ಟದ ಉನ್ನತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 2019–20ನೇ ಸಾಲಿನಲ್ಲಿ ಪ.ಜಾತಿ ವಿದ್ಯಾರ್ಥಿಗಳಿಗೆ ತರಬೇತಿ ನೀಡಲು 24.8 ಕೋಟಿ ಹಾಗೂ ಪ.ಪಂಗಡದ ವಿದ್ಯಾರ್ಥಿಗಳಿಗೆ 11 ಕೋಟಿ ರೂ. ಅನುದಾನ ಒದಗಿಸಲಾಗಿದೆ. 52 ಸಾವಿರ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಪರೀಕ್ಷೆ ನಡೆಸಿ, 2754 ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ಕಲ್ಯಾಣ ಕರ್ನಾಟಕ ವಿಭಾಗ ವ್ಯಾಪ್ತಿಯ ಜಿಲ್ಲೆಗಳ 900 ಅಭ್ಯರ್ಥಿಗಳಿಗೆ ತರಬೇತಿ ಪಡೆಯಲು ಆದೇಶ ಹೊರಡಿಸಲಾಗಿದೆ. 2020–12ನೇ ಸಾಲಿನಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕಾರ್ಯಕ್ರಮಕ್ಕಾಗಿ 14 ಕೋಟಿಯನ್ನು ಮೀಸಲಿಡಲಾಗಿದೆ. ಈ ವರ್ಷದಿಂದ ನ್ಯಾಯಾಲಯವು ನಡೆಸುವ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿಯನ್ನು ಪ್ರಾರಂಭಿಸಲಾಗುವುದು ಎಂದರು.



ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸಮಾಜ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದರು. ಉಪಮುಖ್ಯಮಂತ್ರಿ ಗೋವಿಂದ ಎಂ. ಕಾರಜೋಳ, ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್, ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಕುಮಾರ ನಾಯಕ್ ಮತ್ತಿತರರಿದ್ದರು.

ನರ್ಸಿಂಗ್ ಕೋರ್ಸ್‌ಗಳ ತರಬೇತಿಯನ್ನು ಹೆಚ್ಚು ಅಭ್ಯರ್ಥಿಗಳಿಗೆ ನೀಡಬೇಕು. ಜೆಇಇ ಮತ್ತು ನೀಟ್ ಗಳಿಗೆ ತರಬೇತಿಯನ್ನು ಅತ್ಯುತ್ತಮವಾಗಿ ನೀಡಬೇಕು. ಮಿಲಿಟರಿ ಪೂರ್ವ ತರಬೇತಿಯನ್ನು ಪ್ರತಿಷ್ಠಿತ ಸಂಸ್ಥೆಗಳ ಮೂಲಕ ನೀಡಬೇಕು. ಪರೀಕ್ಷಾ ಪೂರ್ವ ತರಬೇತಿಯಿಂದ ಸಾಕಷ್ಟು ಅನುಕೂಲಗಳಿವೆ. ಆದರೆ ಗುಣಮಟ್ಟದ ತರಬೇತಿ ನೀಡಿ, ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಯಶಸ್ವಿಯಾಗುವಂತೆ ಕ್ರಮಕೈಗೊಳ್ಳಬೇಕು. ಅಭ್ಯರ್ಥಿಗಳು ಈ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಪರೀಕ್ಷೆಯಲ್ಲಿ ಯಶಸ್ವಿಯಾಗುವ ಮೂಲಕ ಇತರರಿಗೆ ಮಾದರಿಯಾಗಬೇಕೆಂದರು.

ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯ ಸಲಹೆಗಾರ ಇ. ವೆಂಕಟಯ್ಯ, ಸಮಾಜ ಕಲ್ಯಾಣ ಇಲಾಖೆ ಆಯುಕ್ತ ರವಿಕುಮಾರ್ ಸುರಪುರ್ ಮತ್ತಿತರರಿದ್ದರು.